**Akashvani : Bangalore**
**National Bulletin In Kannada**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**02.04.2025 / 7.35 am**

**<><*<><>*><>**

ಮುಖ್ಯಾಂಶಗಳು

**೧.ವಕ್ಫ್ ತಿದ್ದುಪಡಿ ವಿಧೇಯಕ-೨೦೨೫ ಕುರಿತು ಲೋಕಸಭೆಯಲ್ಲಿ ಇಂದು ಚರ್ಚೆ- ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು**

**೨.ಕಳೆದ ಹಣಕಾಸು ವರ್ಷದಲ್ಲಿ ನವೀಕರಿಸಬಹುದಾದ ಇಂಧನ ವಲಯ, ಅತ್ಯಧಿಕ ೨೫ ಗಿಗಾವ್ಯಾಟ್ ಸಾಮರ್ಥ್ಯ ವೃದ್ಧಿ**

**೩.ಎರಡು ಸಾವಿರ ರೂಪಾಯಿ ಮುಖಬೆಲೆಯ ಶೇಕಡ ೯೮ ರಷ್ಟು ನೋಟುಗಳು ಚಲಾವಣೆಯಿಂದ ವಾಪಸ್- ಆರ್‌ಬಿಐ ಮಾಹಿತಿ**

**೪.ಐಪಿಎಲ್ ಟಿ-೨೦ ಕ್ರಿಕೆಟ್; ಲಕ್ನೋ ಸೂಪರ್ ಜೈಂಟ್ಸ್ ವಿರುದ್ಧ ಪಂಜಾಬ್ ಕಿಂಗ್ಸ್‌ಗೆ ೮ ವಿಕೆಟ್ ಜಯ**

**<><*<><>*><>**

ವಕ್ಫ್ ತಿದ್ದುಪಡಿ ವಿಧೇಯಕ-೨೦೨೫, ಲೋಕಸಭೆಯಲ್ಲಿಂದು ಚರ್ಚೆ ಬರಲಿದೆ ಎಂದು ಕೇಂದ್ರ ಸಂದೀಯ ವ್ಯವಹಾರಗಳು ಹಾಗೂ ಅಲ್ಪಸಂಖ್ಯಾತ ವ್ಯವಹಾರಗಳ ಸಚಿವ ಕಿರಣ್ ರಿಜಿಜು ತಿಳಿಸಿದ್ದಾರೆ. ಈ ಕುರಿತು ಸಂಸತ್ ಭವನದಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ವಿಧೇಯಕದ ಕುರಿತು ಸದನದಲ್ಲಿ ೮ ಗಂಟೆಗಳ ಕಾಲ ಚರ್ಚೆ ನಡೆಸಲು ನಿರ್ಧರಿಸಲಾಗಿದೆ. ಅಗತ್ಯವಿದ್ದರೆ ವ್ಯವಹಾರ ಸಲಹಾ ಸಮಿತಿ ಸಭೆಯಲ್ಲಿ ಈ ಸಮಯವನ್ನು ಹೆಚ್ಚಿಸಬಹುದು. ವಿಧೇಯಕದ ಕುರಿತ ಎಲ್ಲಾ ಪ್ರಶ್ನೆಗಳಿಗೆ ಉತ್ತರಿಸಲು ಸರ್ಕಾರ ಸಿದ್ಧವಿದೆ ಎಂದು ಹೇಳಿದರು. ವಿರೋಧ ಪಕ್ಷಗಳು ತಮ್ಮ ತುಷ್ಟೀಕರಣ ರಾಜಕೀಯದಿಂದಾಗಿ ವಿಧೇಯಕವನ್ನು ವಿರೋಧಿಸುತ್ತಿವೆ ಎಂದು ಸಚಿವ ಕಿರಣ್ ರಿಜಿಜು ಆರೋಪಿಸಿದರು. ಜಂಟಿ ಸಂಸದೀಯ ಸಮಿತಿ ಈ ಕಾಯ್ದೆಯ ವ್ಯಾಪಕವಾಗಿ ಪರಿಶೀಲನೆ ನಡೆಸಿದ್ದು, ಇದರಲ್ಲಿರುವ ನಿಬಂಧನೆಗಳ ಕುರಿತು ಸದನದಲ್ಲಿ ಚರ್ಚಿಸಿ ಈ ಕಾಯ್ದೆಯನ್ನು ಜಾರಿಗೊಳಿಸಲು ಪ್ರಯತ್ನಿಸಲಾಗುತ್ತಿದೆ ಎಂದು ಸಚಿವರು ಹೇಳಿದರು.

ಧ್ವನಿ: ಕಿರಣ್ ರಿಜಿಜು ( ೧೬ ಸೆಕೆಂಡ್ಸ್‌ಗಳು)

<><*<><>*><>

ಭಾರತದ ನವೀಕರಿಸಬಹುದಾದ ಇಂಧನ ವಲಯ, ಕಳೆದ ಹಣಕಾಸು ವರ್ಷದಲ್ಲಿ ಇದುವರೆಗಿನ ಅತ್ಯಧಿಕ ಸಾಮರ್ಥ್ಯ ವೃದ್ಧಿಯನ್ನು ಸಾಧಿಸಿದ್ದು, ಮಾರ್ಚ್ ಅಂತ್ಯದ ವೇಳೆಗೆ ೨೫ ಗಿಗಾವ್ಯಾಟ್ ಸಾಧಿಸಲಾಗಿದೆ ಎಂದು ಕೇಂದ್ರ ನವ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ. ನವದೆಹಲಿಯಲ್ಲಿ ನಿನ್ನೆ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಚಿವರು, ೨೦೨೩-೨೪ರ ಹಣಕಾಸು ವರ್ಷದಲ್ಲಿ ಸಾಧಿಸಲಾದ ೧೮.೫೭ ಗಿಗಾವ್ಯಾಟ್‌ಗಳಿಗೆ ಹೋಲಿಸಿದರೆ, ಕಳೆದ ಹಣಕಾಸು ವರ್ಷದಲ್ಲಿ ಈ ವಲಯದ ಸಾಮರ್ಥ್ಯ ಸುಮಾರು ಶೇಕಡ ೩೫ ರಷ್ಟು ಹೆಚ್ಚಳ ಕಂಡಿದೆ ಎಂದು ಹೇಳಿದ್ದಾರೆ. ನವೀಕರಿಸಬಹುದಾದ ಇಂಧನ ಕ್ಷೇತ್ರದಲ್ಲಿ ದೇಶದ ಯಶಸ್ಸಿನಲ್ಲಿ ಸೌರಶಕ್ತಿ  ವಲಯ ಮುಂಚೂಣಿ ಪಾತ್ರ ವಹಿಸಿದ್ದು, ಅದರ ಸಾಮರ್ಥ್ಯ ಕಳೆದ ಹಣಕಾಸು ವರ್ಷದಲ್ಲಿ ೧೫ ರಿಂದ ಸುಮಾರು ೨೧ ಗಿಗಾವ್ಯಾಟ್‌ಗಳಿಗೆ ಏರಿಕೆಯಾಗಿದೆ. ಆ ಮೂಲಕ ಸುಮಾರು ಶೇಕಡ ೩೮ ರಷ್ಟು ಬೆಳವಣಿಗೆ ದಾಖಲಿಸಿದೆ ಎಂದರು. ಭಾರತದ ಸೌರ ಫೋಟೊ ವೋಲ್ಟಾಯಿಕ್ ಕೋಶ, ಉತ್ಪಾದನಾ ಸಾಮರ್ಥ್ಯವು ಮಾರ್ಚ್ ೨೦೨೪ ರಲ್ಲಿ ೯ ಗಿಗಾವ್ಯಾಟ್‌ಗಳಿಂದ ಈ ವರ್ಷದ ಮಾರ್ಚ್‌ನಲ್ಲಿ ಸುಮಾರು ೨೫ ಗಿಗಾವ್ಯಾಟ್‌ಗಳಿಗೆ ಸುಮಾರು ಮೂರು ಪಟ್ಟು ಹೆಚ್ಚಾಗಿದೆ ಎಂದು ಅವರು ಹೇಳಿದರು. ಕಳೆದ ಹಣಕಾಸು ವರ್ಷದಲ್ಲಿ ಪಿಎಂ ಕುಸುಮ್ ಯೋಜನೆ, ಉತ್ತಮ ಪ್ರಗತಿಯನ್ನು ಕಂಡಿದೆ. ಇದರ ಜೊತೆಗೆ 'ಪಿಎಂ ಸೂರ್ಯ ಘರ್ ಮುಫ್ತ್ ಬಿಜ್ಲಿ' ಯೋಜನೆಯನ್ನು ಪ್ರಾರಂಭಿಸಿದಾಗಿನಿಂದ, ೧.೧ ಲಕ್ಷಕ್ಕೂ ಹೆಚ್ಚು ಕುಟುಂಬಗಳು ಇದರ ಪ್ರಯೋಜನ ಪಡೆದಿವೆ. ಅಲ್ಲದೆ, ಹಿಂದಿನ ಹಣಕಾಸು ವರ್ಷದಲ್ಲಿ ಸುಮಾರು ೬ ಲಕ್ಷ ಉದ್ಯೋಗಗಳನ್ನು ಸೃಜಿಸಲಾಗಿದೆ ಎಂದು ಸಚಿವರ ಪ್ರಲ್ಹಾದ್ ಜೋಶಿ ಹೇಳಿದ್ದಾರೆ.

<><*<><>*><>

ಭಾರತದ ನವೀಕರಿಸಬಹುದಾದ ಇಂಧನ ಕ್ಷೇತ್ರದ ಬೆಳವಣಿಗೆಯನ್ನು ಪ್ರಧಾನಮಂತ್ರಿ ನರೇಂದ್ರ ಮೋದಿ ಶ್ಲಾಘಿಸಿದ್ದಾರೆ.  ಕೇಂದ್ರ ನವ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ ಅವರ ಸಾಮಾಜಿಕ ಮಾಧ್ಯಮ ಪೋಸ್ಟ್‌ಗೆ ಪ್ರತಿಕ್ರಿಯಿಸಿರುವ ಪ್ರಧಾನಿ, ನವೀಕರಿಸಬಹುದಾದ ಇಂಧನ ಕ್ಷೇತ್ರದ ಸಾಧನೆಗಳು ಒಂದು ಉತ್ತಮ ಬೆಳವಣಿಗೆ. ಈ ಸಾಧನೆಗಳು ದೇಶದ ನಾಗರಿಕರ ಸುಸ್ಥಿರತೆಯ ಬದ್ಧತೆಯನ್ನು ವಿವರಿಸುತ್ತದೆ ಎಂದಿದ್ದಾರೆ.

<><*<><>*><>

ಶೇಕಡ ೯೮ ರಷ್ಟು ೨ ಸಾವಿರ ರೂಪಾಯಿ ಮುಖಬೆಲೆಯ ನೋಟುಗಳು ಹಿಂಪಡೆಯಲಾಗಿದೆ ಎಂದು ಭಾರತೀಯ ರಿಸರ್ವ್ ಬ್ಯಾಂಕ್- ಆರ್‌ಬಿಐ ತಿಳಿಸಿದೆ. ೨೦೨೩ರ ಮೇ ೧೯ ರಂದು ೨ ಸಾವಿರ ರೂಪಾಯಿ ಮುಖಬೆಲೆಯ ನೋಟುಗಳನ್ನು ಚಲಾವಣೆಯಿಂದ ಹಿಂಪಡೆಯುವ ನಿರ್ಧಾರ ಘೋಷಿಸಿತ್ತು. ಈ ಕುರಿತು ಬಿಡುಗಡೆಗೊಳಿಸಿರುವ ಹೇಳಿಕೆಯಲ್ಲಿ ಆರ್‌ಬಿಐ, ೨೦೨೩ರ ಮೇ ೧೯ ರಂದು ೩.೫೬ ಲಕ್ಷ ಕೋಟಿ ರೂಪಾಯಿ ಮೌಲ್ಯದ ೨ ಸಾವಿರ ರೂಪಾಯಿ ಮುಖಬೆಲೆಯ ನೋಟುಗಳು ಚಲಾವಣೆಯಲ್ಲಿದ್ದವು. ಈ ವರ್ಷದ ಮಾರ್ಚ್ ೩೧ರ ವೇಳೆಗೆ ಕೇವಲ ೬ ಸಾವಿರದ ೩೬೬ ಕೋಟಿ ರೂಪಾಯಿ ಮೌಲ್ಯದ ೨ ಸಾವಿರ ರೂಪಾಯಿ ಮುಖಬೆಲೆಯ ನೋಟುಗಳು ಚಲಾವಣೆಯಲ್ಲಿದ್ದವು ಎಂದು ತಿಳಿಸಿದೆ. ರಿಸರ್ವ್ ಬ್ಯಾಂಕ್‌ನ ೧೯ ಕಚೇರಿಗಳಲ್ಲಿ ೨ ಸಾವಿರ ರೂಪಾಯಿ ಮುಖಬೆಲೆಯ ನೋಟುಗಳನ್ನು ಹಿಂದಿರುಗಿಸಲು ಈಗಲೂ ಅವಕಾಶವಿದೆ. ಹಿಂಪಡೆಯುವ ನಿರ್ಧಾರ ಘೋಷಿಸಲಾಗಿದ್ದರೂ ೨ ಸಾವಿರ ರೂಪಾಯಿ ಮುಖಬೆಲೆಯ ನೋಟುಗಳ ಈಗಲೂ ಕಾನೂನು ಬದ್ಧ ಚಲಾವಣೆ ಮುಂದುವರೆದಿದೆ.

**<><*<><>*><>**

ಭಾರತ ಚುನಾವಣಾ ಆಯೋಗ, ೨೫ ದಿನಗಳ ಅವಧಿಯಲ್ಲಿ ಚುನಾವಣಾ ನೋಂದಣಿ ಅಧಿಕಾರಿ, ಜಿಲ್ಲಾ ಚುನಾವಣಾ ಅಧಿಕಾರಿ ಮತ್ತು ಮುಖ್ಯ ಚುನಾವಣಾ ಅಧಿಕಾರಿ ಮಟ್ಟದಲ್ಲಿ ರಾಜಕೀಯ ಪಕ್ಷಗಳೊಂದಿಗೆ ಒಟ್ಟು ೪ ಸಾವಿರದ ೭೧೯ ಸಭೆಗಳನ್ನು ನಡೆಸಿದೆ. ಅಸ್ತಿತ್ವದಲ್ಲಿರುವ ಕಾನೂನು ಚೌಕಟ್ಟಿನೊಳಗೆ ಸಂಬಂಧಪಟ್ಟ ಸಮರ್ಥ ಅಧಿಕಾರಿಗಳಿಂದ ಬಾಕಿ ಇರುವ ಯಾವುದೇ ಸಮಸ್ಯೆಗಳನ್ನು ಹಾಗೂ ಕಾಲಕಾಲಕ್ಕೆ ಚುನಾವಣಾ ಆಯೋಗ ಹೊರಡಿಸಿದ ಕೈಪಿಡಿಗಳು, ಮಾರ್ಗಸೂಚಿಗಳು ಮತ್ತು ಸೂಚನೆಗಳನ್ನು ಪರಿಹರಿಸುವ ಗುರಿಯನ್ನು ಈ ಸಭೆಗಳು ಹೊಂದಿದ್ದವು.

**<><*<><>*><>**

ಕರ್ನಾಟಕ ಸರ್ಕಾರ ನಿನ್ನೆಯಿಂದ ರಾಜ್ಯದಲ್ಲಿ ಡೀಸೆಲ್ ಬೆಲೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ೨ ರೂಪಾಯಿ ಹೆಚ್ಚಿಸಿದೆ. ಪ್ರತಿಪಕ್ಷ ಬಿಜೆಪಿ ಮತ್ತು ಜೆಡಿಎಸ್ ಸರ್ಕಾರದ ಈ ನಿರ್ಧಾರವನ್ನು ಟೀಕಿಸಿವೆ. ಬೆಲೆ ಏರಿಕೆಗೂ ಮೊದಲು ಡೀಸೆಲ್ ದರ ಲೀಟರ್‌ಗೆ ೮೮ ರೂಪಾಯಿ ೯೯ ಪೈಸೆಯಷ್ಟಿತ್ತು. ಇದೀಗ ೯೦ ರೂಪಾಯಿ ೯೯ ಪೈಸೆಯಷ್ಟಾಗಿದೆ. ಈ ಕ್ರಮದ ಕುರಿತಂತೆ ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವ ಎಚ್.ಡಿ.ಕುಮಾರಸ್ವಾಮಿ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

**<><*<><>*><>**

ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ದೇಶಾದ್ಯಂತ ಹೆದ್ದಾರಿಗಳು ಮತ್ತು ಎಕ್ಸ್‌ಪ್ರೆಸ್‌ವೇಗಳಲ್ಲಿ ಚಾಲನೆ ಮಾಡುವ ವಾಹನಗಳಿಗೆ ಟೋಲ್ ಶುಲ್ಕವನ್ನು ಶೇಕಡ ೪ ರಿಂದ ೫ ರಷ್ಟು ಹೆಚ್ಚಿಸಿದೆ. ಈ ಹೊಂದಾಣಿಕೆಯು ಎನ್‌ಹೆಚ್‌ಎಐನ ವಾರ್ಷಿಕ ಪರಿಶೀಲನೆಯ ಭಾಗವಾಗಿದ್ದು, ಸಗಟು ಬೆಲೆ ಸೂಚ್ಯಂಕದ ಆಧಾರದ ಮೇಲೆ ಟೋಲ್ ದರಗಳನ್ನು ಹಣದುಬ್ಬರದೊಂದಿಗೆ ಹೊಂದಿಸಲಾಗುತ್ತದೆ. ಹೆಚ್ಚುವರಿ ಆದಾಯವು ಹೆದ್ದಾರಿ ನಿರ್ವಹಣೆ ಮತ್ತು ವಿಸ್ತರಣಾ ಯೋಜನೆಗಳನ್ನು ಬೆಂಬಲಿಸುತ್ತದೆ ಎಂದು ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಭಾರತದ ರಾಷ್ಟ್ರೀಯ ಹೆದ್ದಾರಿ ಜಾಲದಲ್ಲಿ ಸುಮಾರು ೮೫೫ ಟೋಲ್‌ಪ್ಲಾಜಾಗಳಿದ್ದು, ಅವುಗಳಲ್ಲಿ ೬೭೫ ಸರ್ಕಾರಿ ಅನುದಾನಿತವಾಗಿವೆ, ಮತ್ತು ಇನ್ನೂ ೧೮೦ ಖಾಸಗಿ ನಿರ್ವಾಹಕರು ನಿರ್ವಹಿಸುತ್ತಿದ್ದಾರೆ.

<><*<><>*><>

ನೌಕರರ ಭವಿಷ್ಯ ನಿಧಿ ಸಂಸ್ಥೆ- ಇಪಿಎಫ್‌ಒ, ಇಂದು ತನ್ನ ಬಹು-ಬ್ಯಾಂಕಿಂಗ್ ಕೇಂದ್ರೀಕೃತ ಸಂಗ್ರಹ ವ್ಯವಸ್ಥೆಯನ್ನು ೧೫ ಬ್ಯಾಂಕುಗಳಿಗೆ ವಿಸ್ತರಿಸಿದೆ. ಇದರಿಂದಾಗಿ ಒಟ್ಟು ೩೨ ಬ್ಯಾಂಕ್‌ಗಳಿಗೆ ತಲುಪಿದೆ. ನವದೆಹಲಿಯಲ್ಲಿ ನಡೆದ ಸಮಾರಂಭವನ್ನುದ್ದೇಶಿಸಿ ಮಾತನಾಡಿದ ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಸಚಿವ ಡಾ.ಮನ್ಸುಖ್ ಮಾಂಡವಿಯ, ದೇಶದ ಭವಿಷ್ಯವನ್ನು ರೂಪಿಸುವಲ್ಲಿ ನಿರ್ಣಾಯಕ ಪಾತ್ರ ವಹಿಸುವ ಇಪಿಎಫ್‌ಒನಂತಹ ಸಂಸ್ಥೆಗಳು ದೇಶದ ಪ್ರಗತಿಗೆ ಗಮನಾರ್ಹವಾಗಿ ಬೆಂಬಲ ನೀಡುತ್ತಿವೆ ಎಂದು ಹೇಳಿದರು. ಸುಮಾರು ೮ ಕೋಟಿ ಸಕ್ರಿಯ ಸದಸ್ಯರು ಮತ್ತು ೭೮ ಲಕ್ಷಕ್ಕೂ ಹೆಚ್ಚು ಪಿಂಚಣಿದಾರರನ್ನು ಹೊಂದಿರುವ ಇಪಿಎಫ್‌ಒ, ಲಕ್ಷಾಂತರ ಜನರಿಗೆ ಸಾಮಾಜಿಕ ಭದ್ರತೆಯನ್ನು ಖಚಿತಪಡಿಸುತ್ತದೆ. ಹೊಸದಾಗಿ ಪಟ್ಟಿ ಮಾಡಲಾದ ೧೫ ಬ್ಯಾಂಕುಗಳು ವಾರ್ಷಿಕ ಸಂಗ್ರಹಗಳಲ್ಲಿ ಸುಮಾರು ೧೨ ಸಾವಿರ ಕೋಟಿ ರೂಪಾಯಿಗಳ ನೇರ ಪಾವತಿಯಲ್ಲಿ ತೊಡಗಬಹುದಾಗಿದೆ. ಈ ಉಪಕ್ರಮ, ಪಾವತಿಗಳನ್ನು ಸುಗಮಗೊಳಿಸುವುದರ ಜೊತೆಗೆ ದಕ್ಷತೆಯನ್ನು ಹೆಚ್ಚಿಸಿ, ವಹಿವಾಟುಗಳನ್ನು ಸರಳೀಕರಣಗೊಳಿಸುತ್ತದೆ. ಆ ಮೂಲಕ ಕೋಟ್ಯಂತರ ಸದಸ್ಯರಿಗೆ ಪ್ರಯೋಜನವನ್ನು ನೀಡುತ್ತದೆ ಎಂದು ಸಚಿವರು ಹೇಳಿದರು.

<><*<><>*><>

೨೦೨೪-೨೦೨೫ರ ಆರ್ಥಿಕ ವರ್ಷದಲ್ಲಿ ೧೦ ಲಕ್ಷಕ್ಕೂ ಹೆಚ್ಚು ಉದ್ಯೋಗಿಗಳನ್ನು ನೇಮಿಸಿಕೊಂಡು ಮೈಲಿಗಲ್ಲು ಸಾಧಿಸಿರುವ ಸರ್ಕಾರಿ ಇ- ಮಾರ್ಕೆಟ್‌ಪ್ಲೇಸ್- ಜಿಇಎಂ ಪೋರ್ಟಲ್ ಅನ್ನು ಪ್ರಧಾನಮಂತ್ರಿ ನರೇಂದ್ರ ಮೋದಿ ಶ್ಲಾಘಿಸಿದ್ದಾರೆ. ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಅವರ ಸಾಮಾಜಿಕ ಮಾಧ್ಯಮ ಪೋಸ್ಟ್‌ಗೆ ಪ್ರತಿಕ್ರಿಯೆ ನೀಡಿರುವ ಪ್ರಧಾನಿ, ಜಿಇಎಂ ಭಾರತದಾದ್ಯಂತ ತಳಮಟ್ಟದ ಉದ್ಯೋಗ ಮತ್ತು ಆರ್ಥಿಕ ಬೆಳವಣಿಗೆಯನ್ನು ಹೆಚ್ಚಿಸುತ್ತದೆ ಎಂದಿದ್ದಾರೆ. ೩೩ ಸಾವಿರಕ್ಕೂ

ಹೆಚ್ಚು ಸೇವಾ ಪೂರೈಕೆದಾರರೊಂದಿಗೆ, ಜಿಇಎಂನ ಹೊರಗುತ್ತಿಗೆ ಸೇವೆಯು ತಡೆರಹಿತ ನೇಮಕಾತಿಯನ್ನು ಸುಗಮಗೊಳಿಸುತ್ತದೆ ಎಂದು ಕೇಂದ್ರ ಸಚಿವ ಪಿಯೂಷ್ ಗೋಯಲ್ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

**<><*<><>*><>**

ನವದೆಹಲಿಯ ಸಂಸತ್ ಭವನದಲ್ಲಿ ನಿನ್ನೆ ರಾಜ್ಯಸಭಾಪತಿ ಹಾಗೂ ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್, ವಿವಿಧ ರಾಜಕೀಯ ಪಕ್ಷಗಳ ಸಂಸತ್ ಸದಸ್ಯರೊಂದಿಗೆ ಸಂವಾದ ನಡೆಸಿದರು.

**<><*<><>*><>**

ಉತ್ತರ ಪ್ರದೇಶದ ಏಕಾನ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಇಂಡಿಯನ್ ಪ್ರೀಮಿಯರ್ ಲೀಗ್- ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ತಂಡ, ಲಕ್ನೋ ಸೂಪರ್ ಜೈಂಟ್ಸ್ ತಂಡವನ್ನು ೮ ವಿಕೆಟ್‌ಗಳಿಂದ ಮಣಿಸಿದೆ. ಟಾಸ್ ಸೋತು ಮೊದಲು ಬ್ಯಾಟ್ ಮಾಡಿದ ಲಕ್ನೋ ನಿಗದಿತ ೨೦ ಓವರ್‌ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ೧೭೧ ರನ್ ಗಳಿಸಿತು. ಇದಕ್ಕೆ ಉತ್ತರವಾಗಿ ಪಂಜಾಬ್ ಕಿಂಗ್ಸ್ ಕೇವಲ ೧೬.೨ ಓವರ್‌ಗಳಲ್ಲಿ ೨ ವಿಕೆಟ್ ನಷ್ಟಕ್ಕೆ ೧೭೭ ರನ್ ಗಳಿಸಿ ಗೆಲುವು ತನ್ನದಾಗಿಸಿಕೊಂಡಿತು. ಬೆಂಗಳೂರಿನ ಎಂ.ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಗುಜರಾತ್ ಟೈಟಾನ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ ಕ್ಕೆ ಆರಂಭವಾಗಲಿದೆ.

**<><*<><>*><>**

ಮ್ಯಾನ್ಮಾರ್‌ನಲ್ಲಿ ಕಳೆದ ವಾರ ಸಂಭವಿಸಿದ ಭೀಕರ ಭೂಕಂಪದ ಪರಿಣಾಮ ಮೃತಪಟ್ಟವರ ಸಂಖ್ಯೆ ೨ ಸಾವಿರದ ೭೦೦ ಕ್ಕಿಂತಲೂ ಹೆಚ್ಚಾಗಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ <>*><>**